ಅ) *ಬಿಜಾಪುರದಲ್ಲಿ ನಗರದಲ್ಲಿ ನಿರ್ಮಿಸಲಾಗುತ್ತಿರುವ ಒಳಾಂಗಣ ಕ್ರೀಡಾಂಗಣ ಕಟ್ಟಡವು ಅರ್ಧಕ್ಕೆ ನಿಂತಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ?*

ಆ) *ಹಾಗಿದ್ದಲ್ಲಿ ಅರ್ಧಕ್ಕೆ ಸ್ಥಗಿತಗೊಳ್ಳಲು ಕಾರಣಗಳೇನು, ಅದನ್ನು ಯಾವಾಗ ಪೂರ್ತಿ ಮಾಡಲಾಗುವುದು?*

ಇ) *ಈ ಕಟ್ಟಡದ ನಿರ್ಮಾಣ ಪೂರ್ತಿಯಾಗಲು ಎಷ್ಟು ಹಣ ಬೇಕಾಗುವುದು, ಈ ಹಣವನ್ನು ಸರ್ಕಾರವು ಬಿಡುಗಡೆ ಮಾಡುವುದೇ?*

ಶ್ರೀಮತಿ ಲೀಲಾದೇವಿ ಆರ್. ಪ್ರಸಾದ್ (ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವಜನ ಸೇವಾ ಇಲಾಖಾ ಸಚಿವರು) :

ಅ) ಹೌದು

ಆ) ಹಣದ ಕೊರತೆಯಿರುವುದರಿಂದ ಕಟ್ಟಡದ ನಿರ್ಮಾಣ ಕಾರ್ಯ ಅರ್ಧಕ್ಕೆ ಸ್ಥಗಿತಗೊಂಡರೆ, ಕೇಂದ್ರ ಸರ್ಕಾರದ ಅನುದಾನ ಪಡೆದು ಸಾರ್ವಜನಿಕರಿಂದ ವಂತಿಕೆಯ ರೂಪದಲ್ಲಿ ಹಣ ಸಂಗ್ರಹಿಸಿ ಕ್ರೀಡಾಂಗಣ ನಿರ್ಮಾಣಕಾರ್ಯವನ್ನು ಪೂರ್ಣಗೊಳಿಸಲು ಕ್ರಮ ಕೈಗೊಳ್ಳಲಾಗುವುದು.

ಇ) ನಿರ್ಮಾಣ ಕಾರ್ಯವು ಇನ್ನೂ ಪೂರ್ತಿಗೊಳ್ಳಲು ಇನ್ನು ರೂ. 52.00 ಲಕ್ಷಗಳು ಬೇಕಾಗುವುದು ಈ ಉದ್ದೇಶಕ್ಕಾಗಿ ರಾಜ್ಯ ಸರ್ಕಾರವು ಯಾವುದೇ ಹಣ ಬಿಡುಗಡೆ ಮಾಡಲಾಗುವುದಿಲ್ಲ.

ಸಂಪರ್ಕ ಇಲ್ಲದ ರಸ್ತೆಗಳಿಗೆ ಸಂಪರ್ಕ ಒದಗಿಸಲು ಮೀಸಲಿಟ್ಟ ಅನುದಾನ

1738 - ಶ್ರೀ ಯು.ಬಿ. ಬಣಕಾರ್ (ಹಿರೇಕೆರೂರು) : ಮಾನ್ಯ ಲೋಕೋಪಯೋಗಿ ಇಲಾಖಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *50ನೇ ಸ್ವಾತಂತ್ರ್ಯೋತ್ಸವದ ಸಮಾರಂಭದ ಅಡಿಯಲ್ಲಿ ಯಾವುದೇ ಸಂಪರ್ಕ ಇಲ್ಲದ ರಸ್ತೆಗಳಿಗೆ ಸಂಪರ್ಕ ಒದಗಿಸಲು 1997-98ನೇ ಸಾಲಿನಲ್ಲಿ ಎಷ್ಟು ಹಣ ಮೀಸಲಿರಿಸಲಾಗಿದೆ?*

ಆ) *ಯಾವ ಯಾವ ಕೆಲಸಗಳಿಗೆ, ಎಷ್ಟು ಹಣ ಖರ್ಚು ಮಾಡಲಾಗಿದೆ (ವಿವರ ನೀಡುವುದು)*

ಶ್ರೀ ಸಿ.ಎಂ. ಉದಾಸಿ (ಲೋಕೋಪಯೋಗಿ ಸಚಿವರು) :

ಅ) 10.00 ಕೋಟಿ ರೂ.ಗಳನ್ನು ಮೀಸಲಿರಿಸಲಾಗಿದೆ.

ಆ) 1997-98ನೇ ಸಾಲಿನಲ್ಲಿ ವೆಚ್ಚವಾಗಿರುವುದಿಲ್ಲ.